109

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಧಾರವಾಡ ಜಿಲ್ಲೆಯ ನವಲಗುಂದ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ ಸರ್ಕಾರದ ಅಂತಿಮ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: (1) ಸರ್ಕಾರದ ಅಧಿಸೂಚನೆ ಸಂಖ್ಯೆ:ನಅಇ 296 ಬೆಮುಪ್ರಾ 2002 ದಿನಾಂಕ 27-12-2002.

(2) ನವಲಗುಂದ ಪಟ್ಟಣ ಪಂಚಾಯತಿಯ ಪತ್ರ ಸಂಖ್ಯೆ:ನಯೋಪ್ರಾ ಪಾಪಂನ 303 ಮಾಷ್ಟ 2005-06 ದಿನಾಂಕ 17-1-2006.

(3) ನಗರ ಯೋಜನಾ ನಿರ್ದೇಶಕರ ಟಿಪ್ಪಣಿ ಸಂಖ್ಯೆ:ನಯೋ 8 ನವಲಗುಂದ/ಯೋ1049/2006.

*****

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಆದೇಶದಲ್ಲಿ ಸರ್ಕಾರವು ಧಾರವಾಡ ಜಿಲ್ಲೆಯ ನವಲಗುಂದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ ಸರ್ಕಾರವು ತಾತ್ಕಾಲಿಕ ಅನುಮೋದನೆ ನೀಡಿರುತ್ತದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ನವಲಗುಂದ ಪಟ್ಟಣ ಪಂಚಾಯತಿಯ ಮುಖ್ಯಾಧಿಕಾರಿಗಳು ನವಲಗುಂದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಯನ್ನು ರೂಪಿಸಿ ಸರ್ಕಾರದ ಅಂತಿಮ ಅನುಮೋದನೆಗಾಗಿ ಸಂಬಂಧಪಟ್ಟ ಮಹಾಯೋಜನೆಯ ನಕ್ಷೆಗಳು ಮತ್ತು ವರದಿಗಳನ್ನು ಕಳುಹಿಸಿರುತ್ತಾರೆ.

ನವಲಗುಂದ ಪಟ್ಟಣ ಜನಸಂಖ್ಯೆಯು 2001ರ ಜನಗಣತಿಯಂತೆ 22,200ರಷ್ಟು ಇದ್ದು, 20 ವರ್ಷಗಳ ಯೋಜನಾ ಅವಧಿಗೆ ಅಂದರೆ 2021ರ ವೇಳೆಗೆ ಜನಸಂಖ್ಯೆಯು 31,000 ಆಗಬಹುದೆಂದು ಅಂದಾಜಿಸಿ ಮಹಾಯೋಜನೆಯನ್ನು ತಯಾರಿಸಲಾಗಿದೆ. ನವಲಗುಂದ ಪಟ್ಟಣದ ಜನಸಂಖ್ಯೆಯ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿ, ಹವಾಗುಣ ರಸ್ತೆಗಳ ಹಾಲಿ ಪರಿಚಲನಾ ವ್ಯವಸ್ಥೆಯ ಸಮಸ್ಯೆಗಳನ್ನು ವಿಶ್ಲೇಷಿಸಿ ಯೋಜನಾ ತತ್ವ ಹಾಗೂ ಮಹಾಯೋಜನಾ ತಯಾರಿಕೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಪ್ರಕರಣ (12)ರಲ್ಲಿ ನಿಗದಿಪಡಿಸಿರುವ ಅಂಶಗಳನ್ನು ಪರಿಗಣಿಸಿ ಪಟ್ಟಣದ ಮುಂದಿನ ಬೆಳವಣಿಗೆಗೆ ವಿವಿಧ ಉಪಯೋಗಗಳಿಗೆ ಬೇಕಾದ ಭೂಮಿಯನ್ನು ಕಾಯ್ದಿರಿಸಿ ಮಹಾಯೋಜನೆಯನ್ನು ರೂಪಿಸಲಾಗಿದೆ. ಹಾಗೂ ಮಹಾಯೋಜನೆಯನ್ನು ಅನುಷ್ಠಾನಕ್ಕೆ ತರಲು ಆಗತ್ಯವಿರುವ ವಲಯ ನಿಯಮಾವಳಿಗಳನ್ನು ರಚಿಸಲಾಗಿದೆ.

18
22/4/06.

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಪ್ರಕರಣ 13(3)ರಲ್ಲಿನ ಅವಕಾಶದಂತೆ ಸರ್ಕಾರದಿಂದ ತಾತ್ಕಾಲಿಕ ಅನುಮೋದನೆಗೊಂಡಿರುವ ನವಲಗುಂದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಯ ಪ್ರಸ್ತಾವಿತ ಭೂ ಉಪಯೋಗ ನಕ್ಷೆಯಲ್ಲಿ ನಗರ ಯೋಜನಾ ನಿರ್ದೇಶಕರ ಸಲಹೆಯಂತೆ ಕೆಲವು ಜಮೀನುಗಳ ಭೂ ಉಪಯೋಗವನ್ನು ಮಾರ್ಪಡಿಸಲಾಗಿದೆ.

ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ನಅಇ 47 ಬೆಮಪ್ರಾ 2006**
**ಬೆಂಗಳೂರು, ದಿನಾಂಕ 18-04-2006**

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳಿಂದಾಗಿ ನವಲಗುಂದ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಾಸ್ಟರ್ ಪ್ಲಾನ್‌ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಪ್ರಕರಣ 13(3)ರನ್ವಯ ಕರ್ನಾಟಕ ನಗರ ಮತ್ತು ಗ್ರಾಮಾಂತರ (ತಿದ್ದುಪಡಿ) ಕಾಯ್ದೆ 2004ರಂತೆ ಅಂತಿಮ ಅನುಮೋದನೆ ನೀಡಿದೆ.

ಮಾಸ್ಟರ್ ಪ್ಲಾನ್‌ಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ಎಲ್ಲಾ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
18/4/06
(ಎಸ್.ವೈ.ಸಾಗರ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ

ಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಪ್ರಕಟಣೆಗಾಗಿ ಹಾಗೂ ಪ್ರಕಟಿಸಿದ 100 ಪ್ರತಿಗಳನ್ನು ನಗರಾಭಿವೃದ್ಧಿ ಇಲಾಖೆಗೆ ಕಳುಹಿಸಲು ಕೋರಿದೆ.

ಪ್ರತಿ:

1. ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು.
2. ಮುಖ್ಯಾಧಿಕಾರಿಗಳು, ಪಟ್ಟಣ ಪಂಚಾಯತಿ ಯೋಜನಾ ಪ್ರಾಧಿಕಾರ, ನವಲಗುಂದ.
3. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ.
4. ಸರ್ಕಾರದ ಉಪ ಕಾರ್ಯದರ್ಶಿಗಳ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
5. ಶಾಖಾ ರಕ್ಷಾ ಕಡತ:ಹೆಚ್ಚುವರಿ ಪ್ರತಿಗಳು.